**All India Radio: Bangalore**
**Regional Bulletin In Kannada**
**30.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**30.07.2025 / 2.30 p.m.**
**<><><><>**

ಮುಖ್ಯಾಂಶಗಳು

೧. ಕಲ್ಯಾಣ ಕರ್ನಾಟಕ ಜಿಲ್ಲೆಯ ಜನಪ್ರತಿನಿಧಿಗಳೊಂದಿಗೆ ಮುಖ್ಯಮಂತ್ರಿ ಸಭೆ - ಜಿಲ್ಲಾ ಪ್ರಗತಿ ಪರಿಶೀಲನೆ

೨. ರಾಜ್ಯದ ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ - ಲೋಕಸಭೆಯಲ್ಲಿ ಸಂಸದ ಡಾ.ಕೆ.ಸುಧಾಕರ್ ಆರೋಪ

೩. ಭಯೋತ್ಪಾದನ ಚಟುವಟಿಕೆ ಆರೋಪ - ಬೆಂಗಳೂರಿನಲ್ಲಿ ಗುಜರಾತ್ ಭಯೋತ್ಪಾದನ ನಿಗ್ರಹ ದಳದಿಂದ ಶಂಕಿತ ಮಹಿಳೆ ಬಂಧನ

೪. ಧರ್ಮಸ್ಥಳ ಪ್ರಕರಣ - ೨ನೇ ದಿನವೂ ಮುಂದುವರಿದ ಮೃತದೇಹಗಳ ಶೋಧಕಾರ್ಯ

೫. ಕಾಡಾನೆಗಳ ನಿಯಂತ್ರಣಕ್ಕೆ ಕೇಂದ್ರ ಅರಣ್ಯ ಸಚಿವರಿಗೆ ಸಂಸದ ಕೋಟಾ ಶ್ರೀನಿವಾಸ್ ಪೂಜಾರಿ ಮನವಿ

**><><><><><><><><><><><**

ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರು ಮತ್ತು ಶಾಸಕರೊಂದಿಗೆ ನಡೆಸುತ್ತಿರುವ ಕ್ಷೇತ್ರವಾರು ಬಿಡುಗಡೆಯಾಗಿರುವ ಅನುದಾನ, ಇಲಾಖಾವಾರು ಅನುದಾನ ಬಳಕೆ, ಬಜೆಟ್‌ನಲ್ಲಿ ಘೋಷಿಸಿರುವ ಯೋಜನೆಗಳ ಜಾರಿಯ ಸ್ಥಿತಿ ಗತಿ ಕುರಿತ ಸಭೆ ಆರಂಭಗೊಂಡಿದೆ. ಇಂದು ೧೦ ಜಿಲ್ಲೆಯ ಉಸ್ತುವಾರಿ ಸಚಿವರು ಹಾಗೂ ಸಚಿವರು ಮತ್ತು ಶಾಸಕರೊಂದಿಗೆ ಸಭೆ ನಡೆಸಲಿದ್ದಾರೆ. ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ವಿಜಯನಗರ, ಬಳ್ಳಾರಿ, ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಉತ್ತರ ಕನ್ನಡ ಜಿಲ್ಲೆಯ ಉಸ್ತುವಾರಿ ಸಚಿವರು ಹಾಗೂ ಸಚಿವರು ಮತ್ತು ಶಾಸಕರ ಜತೆ ಸಭೆ ನಡೆಸಿ ಅಭಿಪ್ರಾಯ ಪಡೆದುಕೊಳ್ಳಲಿದ್ದಾರೆ. ಜಿಲ್ಲೆಯ ಪ್ರಗತಿಯ ಕುರಿತು ಮಾಹಿತಿ ಪಡೆದುಕೊಳ್ಳಲಿದ್ದಾರೆ. ಈಗಾಗಲೇ ಕಲ್ಬುರ್ಗಿ, ಬೀದರ್ ಹಾಗೂ ಯಾದಗಿರಿ ಜಿಲ್ಲೆಯ ಜನಪ್ರತಿನಿಧಿಗಳ ಸಭೆ ಪೂರ್ಣಗೊಳಿಸಿದ್ದಾರೆ.

**><><><><><><><><><><><**

ರಾಜ್ಯದ ಕಾಳಸಂತೆಯಲ್ಲಿ ದುಪ್ಪಟ್ಟು ಬೆಲೆಗೆ ರಸಗೊಬ್ಬರ ಮಾರಾಟ ಮಾಡಲಾಗುತ್ತಿದೆ ಎಂದು ಲೋಕಸಭೆಯಲ್ಲಿ ಚಿಕ್ಕಬಳ್ಳಾಪುರ ಸಂಸದ ಡಾ.ಕೆ.ಸುಧಾಕರ್ ಆರೋಪಿಸಿದ್ದಾರೆ. ಶೂನ್ಯವೇಳೆಯಲ್ಲಿ ಮಾತನಾಡಿದ ಅವರು, ಮುಂಗಾರು ಅವಧಿ ಕೃಷಿಗೆ ನಿರ್ಣಾಯಕ. ಈ ಸಮಯದಲ್ಲಿ ಭತ್ತ, ಜೋಳ , ದ್ವಿದಳ ಧಾನ್ಯ, ಸೋಯಾಬಿನ್ ಸೇರಿದಂತೆ ವಿವಿಧ ಬೆಳೆಗಳನ್ನು ರೈತರು ಬೆಳೆಯುತ್ತಿದ್ದಾರೆ. ಈ ಹಂಗಾಮಿನಲ್ಲಿ ಕೇಂದ್ರ ಸರ್ಕಾರ ೮.೧೩ ಲಕ್ಷ ಟನ್ ಯೂರಿಯಾವನ್ನು ರಾಜ್ಯಕ್ಕೆ ಕಳುಹಿಸಿದೆ. ಆದರೆ ರಾಜ್ಯ ಸರ್ಕಾರ ದಾಸ್ತಾನು ಇದ್ದರೂ ಯೂರಿಯಾ ಹಾಗೂ ಡಿಎಪಿ ಹಂಚಿಕೆ ಮಾಡಿಲ್ಲ ಈ ಮೂಲಕ ರೈತರಿಗೆ ಅನ್ಯಾಯ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ. ೨೫೮ ರೂಪಾಯಿಗೆ ಸಬ್ಸಿಡಿ ದರದಲ್ಲಿ ಸಿಗಬೇಕಿದ್ದ ಯೂರಿಯಾವನ್ನು ೫೦೦ ರೂಪಾಯಿ ಮಾರಾಟಮಾಡಲಾಗುತ್ತಿದೆ. ಡಿಎಪಿಯನ್ನು ಸಾವಿರದ ಇನ್ನೂರು ರೂಪಾಯಿ ಬದಲು ಎರಡು ಸಾವಿರ ರೂಪಾಯಿಗೆ ಮಾರಾಟ

ಮಾಡಲಾಗುತ್ತಿದೆ. ಕೇಂದ್ರ ಸರ್ಕಾರ ಮಧ್ಯ ಪ್ರವೇಶ ಮಾಡಿ ಸಮರ್ಪಕ ರಸಗೊಬ್ಬರ ಪೂರೈಕೆಗೆ ರಾಜ್ಯಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಸೂಚನೆ ನೀಡಬೇಕೆಂದು ಆಗ್ರಹಿಸಿದ್ದಾರೆ.

><><><><><><><><

ಅಲ್ ಖೈದಾ ಭಯೋತ್ಪಾದಕ ಸಂಘಟನೆಗೆ ಸೇರಿದ ಮಹಿಳೆ ಒಬ್ಬರನ್ನು ಗುಜರಾತ್ ಭಯೋತ್ಪಾದನಾ ನಿಗ್ರಹಾದಳ ಬೆಂಗಳೂರಿನಲ್ಲಿಂದು ಬಂಧಿಸಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ನಗರದಾದ್ಯಂತ ವ್ಯಾಪಕ ಕಣ್ಗಾವಲು ವಿಧಿಸಲಾಗಿದೆ. ಎಂದು ಐಎಎನ್ಎಸ್ ಸುದ್ದಿ ಸಂಸ್ಥೆ ತಿಳಿಸಿದೆ. ಜಾರ್ಖಂಡ್ ಮೂಲದ ೩೩ ವರ್ಷದ ಶಮಾ ಪರ್ವಿನ್ ಎಂಬುವವರನ್ನು ಬಂಧಿಸಿದ್ದು, ಈಕೆ ಬೆಂಗಳೂರಿನಲ್ಲಿ ಅಲ್‌ಖೈದಾ ಸಂಘಟನೆಯನ್ನು ಬಲಪಡಿಸುವ ಕಾರ್ಯದಲ್ಲಿ ತೊಡಗಿದ್ದಳು. ಬೆಂಗಳೂರಿನ ಮನೋರಾಯನ ಪಾಳ್ಯದಲ್ಲಿ ಈಕೆ ವಾಸಿಸುತ್ತಿದ್ದಳು ಎಂದು ತಿಳಿದುಬಂದಿದೆ. ಪದವೀಧರೆಯಾದ ಈಕೆ, ತನ್ನ ಸಾಫ್ಟ್‌ವೇರ್ ಎಂಜಿನಿಯರ್ ಸಹೋದರನ ಜೊತೆ ನೆಲೆಸಲು ಮೂರು ವರ್ಷಗಳ ಹಿಂದೆ ಬೆಂಗಳೂರಿಗೆ ಆಗಮಿಸಿದ್ದಳು.  ಸಾಮಾಜಿಕ ಮಾಧ್ಯಮಗಳಲ್ಲಿ ಅಲ್ ಖೈದಾ ಸಂಘಟನೆಗಳ ಪರ ಅಭಿಪ್ರಾಯ ಮೂಡಿಸುವ ಕೃತ್ಯದಲ್ಲಿ ಈಕೆ ತೊಡಗಿದ್ದಳು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

><><><><><><><><

ಧರ್ಮಸ್ಥಳ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಹೂತು ಹಾಕಲಾಗಿದೆ ಎನ್ನಲಾದ ಮೃತದೇಹ ಪತ್ತೆಗಾಗಿ ಶೋಧ ಕಾರ್ಯ ಇಂದು ಮುಂದುವರೆದಿದೆ.  ಪ್ರಕರಣದ ಸಾಕ್ಷಿ ದೂರುದಾರ ನೇತ್ರಾವತಿ ನದಿ ಪಕ್ಕದ ದಟ್ಟ ಕಾನನದ ನಡುವೆ ತೋರಿಸಿದ ೨ನೇ ಜಾಗವನ್ನು ಅಗೆಯುವ ಕಾರ್ಯ ನಡೆಯುತ್ತಿದೆ. ಪುತ್ತೂರಿನ ಉಪವಿಭಾಗಾಧಿಕಾರಿ ಸ್ಟೆಲ್ಲಾ ವರ್ಗೀಸ್ ಹಾಗು ಎಸ್.ಐ.ಟಿ. ಎಸ್ ಪಿ ಜಿತೇಂದ್ರ ಕುಮಾರ್ ದಯಾಮ ಸ್ಥಳದಲ್ಲಿದ್ದು ಮಾರ್ಗದರ್ಶನ ನೀಡುತ್ತಿದ್ದಾರೆ. ನಿನ್ನೆ ನಡೆದ ಶೋಧ ಕಾರ್ಯದಲ್ಲಿ ಸಾಕ್ಷಿ ದೂರುದಾರ ತೋರಿಸಿದ ಮೊದಲ ಜಾಗದಲ್ಲಿ ಯಾವುದೇ ಕುರುಹುಗಳು ಪತ್ತೆಯಾಗಿಲ್ಲ.

><><><><><><><><

ಯೂರಿಯಾ ಗೊಬ್ಬರ ಅಭಾವದ ನಡುವೆಯೇ ರಾಜ್ಯದಲ್ಲಿ ಕಳಪೆ ಗೊಬ್ಬರ ಹಾಗೂ ಕಳಪೆ ಬೀಜಗಳ ಮಾರಾಟ ಜಾಲ ಸಕ್ರಿಯವಾಗಿದೆ. ಪ್ರಸಕ್ತ ಮುಂಗಾರಿನಲ್ಲಿ ಕಳಪೆ ಬೀಜಗಳ ಮಾರಾಟದಿಂದ ಹಾವೇರಿ ಜಿಲ್ಲೆ ಸೇರಿದಂತೆ ರಾಜ್ಯದ ೬೩೯ ರೈತರಿಗೆ ೫೮ ಲಕ್ಷ ೪೦ ಸಾವಿರ ರೂಪಾಯಿ ವಂಚನೆಯಾಗಿದ್ದು, ರಾಣೆಬೆನ್ನೂರು ಶಹರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ಎಂದು ಹಾವೇರಿ ಜಿಲ್ಲಾಧಿಕಾರಿ ವಿಜಯ ಮಹಾಂತೇಶ ದಾನಮ್ಮನವರ ತಿಳಿಸಿದ್ದಾರೆ. ರಾಣೆಬೆನ್ನೂರಿನಲ್ಲಿ ಇರುವ ನಿಸರ್ಗ ಸೀಡ್ಸ್ ಕಂಪನಿಯವರು ರೈತರಿಗೆ ಮಾರಿದ್ದ ನಿಸರ್ಗ ಗೋಲ್ಡ್-೩೩೯೯, ನಿಸರ್ಗ ೪೫೫೫, ಎಸ್ ೨೫ ಹಾಗೂ ನಿಸರ್ಗ ೯೯ ಹೆಸರಿನ ಮೆಕ್ಕೆಜೋಳದ ಬೀಜಗಳು ಕಳಪೆ ಎಂಬುದನ್ನು ಕೃಷಿ ಇಲಾಖೆ ಅಧಿಕಾರಿಗಳು ದೃಢಪಡಿಸಿದ್ದಾರೆ. ಬೀಜ ತಯಾರಿಸಿದ್ದ ಕಂಪನಿಯ ಮಾಲೀಕರು ಹಾಗೂ ಬೀಜ ಮಾರಿದ್ದ ಮಳಿಗೆಗಳ ಮಾಲೀಕರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

><><><><><><><><

ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿದ್ದು ಕಾಡಾನೆಗಳ ನಿಯಂತ್ರಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಉಡುಪಿ-ಚಿಕ್ಕಮಗಳೂರು ಸಂಸದ ಕೋಟಾ ಶ್ರೀನಿವಾಸ ಪೂಜಾರಿ ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಯಾದವ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದಾರೆ. ಜಿಲ್ಲೆಯ ಹಲವೆಡೆ ಕಾಡಾನೆಗಳ ಹಾವಳಿ ಹೆಚ್ಚಾಗಿದ್ದು  ರೈತರ ಕಾರ್ಮಿಕರ ಜೀವ ಹಾನಿ ಜೊತೆಗೆ ಬೆಳೆಗಳನ್ನು ನಾಶಮಾಡುತ್ತಿವೆ. ಈ ಬಗ್ಗೆ ಸಚಿವರ ಗಮನಕ್ಕೆ  ತರಲಾಗಿದ್ದು ಕಾಡಾನೆಗಳ ನಿಯಂತ್ರಣಕ್ಕೆ ಆನೆ ದೊಡ್ಡಿಗಳ ನಿರ್ಮಾಣ ಮಾಡಿ ಶಾಶ್ವತ ಪರಿಹಾರದ ಯೋಜನೆ ರೂಪಿಸುವಂತೆ ಮನವಿ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

><><><><><><><><

ಕೇಂದ್ರ ಸರ್ಕಾರದ ವಿವಿಧ ಸಾಮಾಜಿಕ ಮತ್ತು ಆರ್ಥಿಕ ಭದ್ರತಾ ಯೋಜನೆಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮ ದಾವಣಗೆರೆ ಜಿಲ್ಲೆಯಲ್ಲಿ ಯಶಸ್ವಿಯಾಗಿ ಮುಂದುವರಿದಿದೆ. ಕಳೆದ ೨೫ ದಿನಗಲ್ಲಿ ಜಿಲ್ಲೆಯ ೪೯ ಗ್ರಾಮ ಪಂಚಾಯತಿಗಳಲ್ಲಿ ಆರ್ಥಿಕ ಸಾಕ್ಷರತೆ ಮೂಡಿಸಲಾಗಿದೆ ಎಂದು ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ ಪಡದಯ್ಯ ಹಿರೇಮಠ ತಿಳಿಸಿದ್ದಾರೆ. ಈ ಕುರಿತು ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಕಳೆದ ೨೫ ದಿನಗಳ ಅವಧಿಯಲ್ಲಿ ೩೨೦೦ ಹೊಸ ಖಾತೆಗಳು, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆಯಡಿ ೬ ಸಾವಿರದ ೨೦೦, ಪ್ರಧಾನ ಮಂತ್ರಿ ಸುರಕ್ಷಾ ಭಿಮಾ ಯೋಜನೆಯಡಿ ೯ ಸಾವಿರದ ೫೦೦ ಕ್ಕೂ ಅಧಿಕ ಹೊಸ ಅರ್ಜಿಗಳನ್ನು ಸ್ವೀಕರಿಸಲಾಗಿದೆ ಎಂದು ಹೇಳಿದ್ದಾರೆ.

**ಧ್ವನಿ-ಪಡದಯ್ಯ ಹಿರೇಮಠ, ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ವ್ಯವಸ್ಥಾಪಕ (೩೦ ಸೆಕೆಂಡುಗಳು)**

><><><><><><><><

ರಾಜ್ಯಸರ್ಕಾರ ನಾಳೆ ನಡೆಯಲಿರುವ ಕ್ವಾಂಟಮ್ ಸಂವಾದದಲ್ಲಿ ನೊಬೆಲ್ ಪ್ರಶಸ್ತಿ ವಿಜೇತರಿಗೆ ವಿಶೇಷ ಆತಿಥ್ಯ ವಹಿಸಲಿದೆ. ೨೦೧೬ರ ಭೌತಶಾಸ್ತ್ರ ನೊಬೆಲ್ ಪ್ರಶಸ್ತಿ ವಿಜೇತ ಡಂಕನ್ ಹಾಲ್ಡೇನ್ ಮತ್ತು ೨೦೦೪ರ ಭೌತಶಾಸ್ತ್ರ ನೊಬೆಲ್ ಪ್ರಶಸ್ತಿ ವಿಜೇತರನ್ನು ಆಹ್ವಾನಿಸಿದೆ.  ನಾಳೆ ಮತ್ತು ನಾಡಿದ್ದು ನಡೆಯಲಿರುವ ದೇಶದ ಮೊದಲ ಕ್ವಾಂಟಮ್ ಇಂಡಿಯಾ ಬೆಂಗಳೂರು ಶೃಂಗಸಭೆಗೆ ಮುಂಚಿತವಾಗಿ ಈ ಸಂವಾದ ನಡೆಯಲಿದೆ.

><><><><><><><><

ಬೆಂಗಳೂರಿನಲ್ಲಿ ಆಗಸ್ಟ್ ೪ರಂದು ನಡೆಯಲಿರುವ ಪ್ರತಿಭಟನೆಯಲ್ಲಿ ಹಾಗೂ ಕಾಂಗ್ರೆಸ್ ಹಿರಿಯ ಮುಖಂಡ ರಾಹುಲ್‌ಗಾಂಧಿ ಭಾಗವಹಿಸುತ್ತಿರುವ  ಪಾದಯಾತ್ರೆಗೆ ಬಿಜೆಪಿ ಆಕ್ಷೇಪ ವ್ಯಕ್ತ ಪಡಿಸಿದೆ. ಸಾಮಾಜಿಕ ಜಾಲತಾಣದಲ್ಲಿ ರಾಜ್ಯ ಸರ್ಕಾರದ ವಿರುದ್ಧ ಪ್ರತಿಪಕ್ಷ ನಾಯಕ ಆರ್.ಆಶೋಕ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

><><><><><><><><

ಬಿಬಿಎಂಪಿ ಪೂರ್ವ ವಲಯ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ಜಾಗೃತಿ ಮೂಡಿಸುವ ಸಲುವಾಗಿ, ರಸ್ತೆ ಅಕ್ಕ ಪಕ್ಕದಲ್ಲಿ ಕಸ ಎಸೆಯುವವರನ್ನು ಗುರುತಿಸಿ, ದಂಡ ವಿಧಿಸಿ, ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಪೂರ್ವ ವಲಯ ಆಯುಕ್ತರಾದ ಸ್ನೇಹಲ್  ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಲಯ ಮಟ್ಟದಲ್ಲಿ ವ್ಯವಸ್ಥಿತ ಸ್ವಚ್ಛತಾ ಕಾರ್ಯ ನಿರ್ವಹಣೆ ಜಾರಿಯ ಉದ್ದೇಶದಿಂದ, ಇಂದು ವಾರ್ಡ್ ೬೨ ರಾಮಸ್ವಾಮಿ ಪಾಳ್ಯದಲ್ಲಿ ಪರಿಶೀಲನೆ ನಡೆಸಿದ ವೇಳೆ, ಅವರು ಹಲವು ವಿಷಯಗಳಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ನಿಗದಿತ ಸಮಯದಲ್ಲಿ ಕಡ್ಡಾಯವಾಗಿ ತ್ಯಾಜ್ಯ ಸಂಗ್ರಹಿಸಲು ಆಟೋ ಟಿಪ್ಪರ್ ಚಾಲಕರಿಗೆ ಸೂಚನೆ ನೀಡಿದ್ದಾರೆ .

><><><><><><><><